**1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ**

**MVC** – 534/2025 **PW**–1

**ದಿಃ31.07.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರ ಪರ ವಕೀಲರಾದ ಶ್ರೀ ಎಸ.ಕೆ.ಪಿ ರವರಿಂದಃ**

ನಾನು ಈ ಅರ್ಜಿಯಲ್ಲಿ ಅರ್ಜಿದಾರಳಾಗಿದ್ದು, ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಈ ದಿನ ನ್ಯಾಯಾಲಯದ ಮುಂದೆ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಸಹಿ ನನ್ನದು.

ನಾನು ನನ್ನ ಅರ್ಜಿಗೆ ಸಂಬಂಧಿಸಿದಂತೆ ದೂರಿನ ದೃಢೀಕೃತ ನಕಲನ್ನು ನಿಶಾನೆ ಪಿ 1 ಎಂದು, ಎಫಐಆರನ ದೃಢೀಕೃತ ನಕಲನ್ನು ನಿಶಾನೆ ಪಿ 2 ಎಂದು, ಸ್ಥಳ ಪಂಚನಾಮೆಯ ದೃಢೀಕೃತ ನಕಲನ್ನು ನಿಶಾನೆ ಪಿ 3 ಎಂದು, ಸ್ಥಳ ನಕಾಶೆಯ ದೃಢೀಕೃತ ನಕಲನ್ನು ನಿಶಾನೆ ಪಿ 4 ಎಂದು, ವಾಹನ ತಡೆ ಪಂಚನಾಮೆಯ ದೃಢೀಕೃತ ನಕಲನ್ನು ನಿಶಾನೆ ಪಿ 5 ಎಂದು, ಇನಕ್ವೆಷ್ಟ ಪಂಚನಾಮೆಯ ದೃಢೀಕೃತ ನಕಲನ್ನು ನಿಶಾನೆ ಪಿ 6 ಎಂದು, ಪಿ ಎಂ ವರದಿಯ ದೃಢೀಕೃತ ನಕಲನ್ನು ನಿಶಾನೆ ಪಿ 7 ಎಂದು, ಎರಡು ಐಎಂವಿ ವರದಿಯ ದೃಢೀಕೃತ ನಕಲಗಳನ್ನು ನಿಶಾನೆ ಪಿ 8 ಮತ್ತು ನಿಶಾನೆ ಪಿ 9 ಎಂದು, ಎಫಎಸಎಲ್ ವರದಿಯ ದೃಢೀಕೃತ ನಕಲನ್ನು ನಿಶಾನೆ ಪಿ 10 ಎಂದು, ಅಂತಿಮ ವರದಿಯ ದೃಢೀಕೃತ ನಕಲನ್ನು ನಿಶಾನೆ ಪಿ 11 ಎಂದು, ನೋಟರಿಯವರು ದೃಢೀಕರಿಸಿದ ಎರಡು ಆಧಾರ ಕಾರ್ಡ ನಕಲುಗಳನ್ನು ನಿಶಾನೆ ಪಿ 12 ಮತ್ತು 13 ಎಂದು, ಮಲ್ಲಪ್ಪ.ಬಿ.ಲಕ್ಕುಂಡಿ ಇವರ ಮರಣ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ನಿಶಾನೆ ಪಿ 14 ಎಂದು ಗುರ್ತಿಸಲಾಯಿತು.

(2 ನೇ ಎದುರುದಾರ ಪರ ವಕೀಲರು ಪಾಟೀ ಸವಾಲಿಗೆ ಸಮಯವಕಾಶ ಕೋರಿದ್ದು, ನೀಡಿ ಮುಂದುಡಲಾಯಿತು.)

(ನನ್ನ ಉಕ್ತಲೇಖದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

1 ನೇ ಅಧಿಕ ಹಿ.ದಿ.ನ್ಯಾಹುಬ್ಬಳ್ಳಿ